ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6 ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003

ಸಂಖ್ಯೆ: ಕಶಾಪಮ/ಪರೀಕ್ಷೆ/ಗಣಕ/ಸಿಎಸ್-2/2023-24/09 ದಿನಾಂಕ: 2-11-2023

## ಸುತ್ತೋಲೆ

**ವಿಷಯ:** ಮಾರ್ಚ್-2024 ರಲ್ಲಿ ನಡೆಯುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ-1ಕ್ಕೆ ಹೊಸ (REGULAR) ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಲಿಯ ಜಾಲತಾಣದ PU EXAM PORTAL ಲಾಗಿನ್ ನಲ್ಲಿ ಅಪ್ಲೋಡ್ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಇಪಿ.203.ಎಸ್.ಎಲ್.ಬಿ 2023 ದಿನಾಂಕ:21-09-2023.

---------

ಸರ್ಕಾರದ ಆದೇಶ ಸಂಖ್ಯೆ: ಇಪಿ.203.ಎಸ್.ಎಲ್.ಬಿ 2023 ದಿನಾಂಕ:21-09-2023 ರನ್ವಯ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ವತಿಯಿಂದ 2023-24ನೇ ಸಾಲಿನಿಂದ ಜಾರಿಗೆ ಬರುವಂತೆ ದ್ವಿತೀಯ ಪಿಯುಸಿ ಪರೀಕ್ಷೆಗಳನ್ನು ವಾರ್ಷಿಕ ಪರೀಕ್ಷೆ-1, ವಾರ್ಷಿಕ ಪರೀಕ್ಷೆ-2 ಮತ್ತು ವಾರ್ಷಿಕ ಪರೀಕ್ಷೆ-3 ಎಂಬ ಹೆಸರಿನಲ್ಲಿ ನಡೆಸಲಾಗುವುದು.

ಮಾರ್ಚ್-2024 ರಲ್ಲಿ ನಡೆಯುವ ದ್ವಿತೀಯ ಪಿಯುಸಿ ಪರೀಕ್ಷೆ-1 ಕ್ಕೆ ಅರ್ಹ ಹೊಸ ವಿದ್ಯಾರ್ಥಿಗಳ (REGULAR) ನೋಂದಣಿ ಮಾಹಿತಿಗಳನ್ನು ಮಂಡಲಿಯ ಜಾಲತಾಣದ (https://kseab.karnataka.gov.in) PU EXAM PORTAL ಲಾಗಿನ್‌ನಲ್ಲಿ ಪಡೆಯಲು ಯೋಜಿಸಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜಿನ ಮಾರ್ಚ್-2024 ರ ದ್ವಿತೀಯ ಪಿಯುಸಿ ಪರೀಕ್ಷೆ-1 ನ್ನು ತೆಗೆದುಕೊಳ್ಳುವ ಹೊಸ ವಿದ್ಯಾರ್ಥಿಗಳ ವಿವರಗಳನ್ನು ಕಡ್ಡಾಯವಾಗಿ ಆನ್ಲೈನ್ ಮೂಲಕ ಅಪ್ಲೋಡ್ ಮಾಡುವಂತೆ ಈ ಮೂಲಕ ಆದೇಶಿಸಿದೆ.

1) ಈ ನೋಂದಣಿ ಕಾರ್ಯಕ್ಕೆ ದಿನಾಂಕ: 03-11-2023 ರಿಂದ 21-11-2023 ರವರೆಗೆ ಮಾಹಿತಿಯನ್ನು ಅಪ್ಲೋಡ್ ಮಾಡಲು ಕಾಲಾವಕಾಶವನ್ನು ನಿಗದಿಪಡಿಸಲಾಗಿದೆ.
2) ಮಾಹಿತಿಗಳನ್ನು ಮಂಡಲಿಯ ಜಾಲತಾಣದ https://kseab.karnataka.gov.in ರಲ್ಲಿನ PU EXAM PORTAL ಕಾಲೇಜು ಲಾಗಿನ್ ಮುಖಾಂತರ ಅಪ್ಲೋಡ್ ಮಾಡುವುದು.
3) ಪ್ರಾಂಶುಪಾಲರು ಮಂಡಲಿಯ ಕಾಲೇಜು ಲಾಗಿನ್ ನಲ್ಲಿ ಈಗಾಗಲೇ ಸೃಜಿಸಲಾಗಿರುವ Username and Password ಬಳಸಿ ONLINE ನೋಂದಣಿ ಕಾರ್ಯ ಮಾಡಬಹುದಾಗಿದೆ.
4) ನೋಂದಣಿ ಕಾರ್ಯವನ್ನು ವಿದ್ಯಾರ್ಥಿಗಳ SATS NUMBER ಬಳಸಿ ಮಾಡುವುದು.
5) ONLINE ಡೇಟಾ ಎಂಟ್ರಿ ಪ್ರಾರಂಭಿಸುವ ಮೊದಲು ಕಾಲೇಜಿನ ಪ್ರತಿ ವಿದ್ಯಾರ್ಥಿಯ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಭಾವಚಿತ್ರ (20-80kb) Jpeg, format ನಲ್ಲಿ ಅವರ SATS ನೋಂದಣಿ ಸಂಖ್ಯೆಯ ಅನುಕ್ರಮದಲ್ಲಿ ಸೇವ್ ಮಾಡಿಟ್ಟುಕೊಳ್ಳುವುದು.

   ಉದಾ:-ಅಭ್ಯರ್ಥಿಯ SATS ಸಂಖ್ಯೆಯು 12345678 ಆಗಿದ್ದಲ್ಲಿ ಭಾವಚಿತ್ರವನ್ನು ಸ್ಕ್ಯಾನ್ ಮಾಡಿ P12345678 ಎಂದು soft copy ಗಳನ್ನು ಸೇವ್ ಮಾಡಿಟ್ಟುಕೊಳ್ಳುವುದು.

Scanned with AnyScanner

6) ದ್ವಿತೀಯ ಪಿಯುಸಿ ಪರೀಕ್ಷೆಗೆ ಸಂಬಂಧಿಸಿದಂತೆ ಕಾಲೇಜು ವಿದ್ಯಾರ್ಥಿಗಳ ಬಹುತೇಕ ಮಾಹಿತಿಗಳನ್ನು SATS ಡೇಟಾಬೇಸ್ ನಿಂದ ಪಡೆಯಲಾಗುವುದರಿಂದ ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ, ಪ್ರವರ್ಗ, ಲಿಂಗ ಮತ್ತು ಮಾಧ್ಯಮ, ಸಂಯೋಜನೆ ಹಾಗೂ ವಿಷಯ ಇವುಗಳಲ್ಲಿ ಯಾವುದೇ ತಿದ್ದುಪಡಿಗಳು ಇದ್ದಲ್ಲಿ, ಮಂಡಲಿಯ ಜಾಲತಾಣದಲ್ಲಿ ನೇರವಾಗಿ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಮೊದಲು SATS ಡೇಟಾಬೇಸ್‌ನಲ್ಲಿ ಶಾಲಾ ಶಿಕ್ಷಣ (ಪಿ.ಯು. ಇಲಾಖೆ) 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12 ಇಲ್ಲಿ ತಿದ್ದುಪಡಿ ಮಾಡಿಸಿದ ನಂತರ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ PU EXAM PORTAL ಕಾಲೇಜು ಲಾಗಿನ್‌ನಲ್ಲಿ UPDATE DATA AS IN SATS ಮಾಡಿದ ನಂತರ ಪರಿಷ್ಕೃತ ಮಾಹಿತಿಯನ್ನು ಪರಿಶೀಲಿಸಿ ತಾಳೆ ಹೊಂದಿದ ನಂತರ SUBMIT ಮಾಡುವುದು.

7) SATS ನಲ್ಲಿ ತಿದ್ದುಪಡಿ ಮಾಡಿಸುವಾಗ ಎಸ್.ಎಸ್.ಎಲ್.ಸಿ. ಅಂಕಪಟ್ಟಿಯ ವಿವರಗಳ ಜೊತೆ ಪರಿಶೀಲಿಸುವುದು.

8) ವಿದ್ಯಾರ್ಥಿಗಳ ಮಾಹಿತಿಗಳನ್ನು ONLINE ನಲ್ಲಿ ನೋಂದಾಯಿಸಿದ ನಂತರ ಪ್ರತಿ ವಿದ್ಯಾರ್ಥಿಯ ಮಾಹಿತಿಗಳನ್ನು ವೈಯಕ್ತಿಕವಾಗಿ ತಿಳಿಸುವುದು ಹಾಗೂ ಕಾಲೇಜಿನ ಕ್ರೋಢೀಕೃತ ಮಾಹಿತಿಯನ್ನು CHECKLIST ನಲ್ಲಿ ಪರಿಶೀಲಿಸಿಕೊಳ್ಳಲು ಸಹ ಅವಕಾಶ ಕಲ್ಪಿಸಲಾಗಿದೆ.

**9) ಪ್ರಸ್ತುತ ONLINE ಮೂಲಕ ಭರ್ತಿ ಮಾಡಲಾದ ವಿದ್ಯಾರ್ಥಿಗಳ ವಿವರಗಳು ಪಿ.ಯು ಅಂಕಪಟ್ಟಿಗಳಲ್ಲಿ ನಮೂದಾಗುವುದರಿಂದ ಯಾವುದೇ ತಪ್ಪುಗಳು ಆಗದಂತೆ ಎಚ್ಚರಿಕೆ ವಹಿಸಲು ಸೂಚಿಸಿದೆ. ನಿಗದಿತ ದಿನಾಂಕದ ನಂತರ ನೋಂದಣಿ ಮಾಹಿತಿಗಳನ್ನು ಫ್ರೀಜ್ ಮಾಡುವುದರಿಂದ ತದನಂತರ ವಿದ್ಯಾರ್ಥಿಗಳ ವಿವರಗಳಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ.**

10) ಸದರಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದಂತೆ ಯಾವುದೇ ಸಂದೇಹಗಳಿದ್ದಲ್ಲಿ Screenshot ಸಹಿತ User Manual ಗಳನ್ನು ಮಂಡಲಿಯ ಜಾಲತಾಣದ ಕಾಲೇಜು ಲಾಗಿನ್ ನಲ್ಲಿ ಒದಗಿಸಲಾಗಿದ್ದು, ಅವುಗಳ ಸದುಪಯೋಗ ಪಡೆಯಬಹುದಾಗಿದೆ. ಅಲ್ಲದೆ, ದಿನಾಂಕ: 03-11-2023 ರಿಂದ 21-11-2023 ರವರೆಗೆ ಕಛೇರಿ ಕೆಲಸದ ದಿನಗಳಂದು ಪ್ರಾಂಶುಪಾಲರು ಮಂಡಲಿಯ ಸಹಾಯವಾಣಿ ಸಂಖ್ಯೆ: 080-23310075, 080-23310076 ಗಳಿಗೆ ಕರೆ ಮಾಡಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದ ಸಂದೇಹಗಳನ್ನು ಪರಿಹರಿಸಿಕೊಳ್ಳಬಹುದು.

11) ಪರೀಕ್ಷೆಗೆ ನೊಂದಾಯಿಸಿದ ವಿದ್ಯಾರ್ಥಿಯ ಎಸ್.ಎಸ್.ಎಲ್.ಸಿ. ಅಂಕಪಟ್ಟಿಯ ಒಂದು ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಪರೀಕ್ಷಾ ಮಂಡಲಿಗೆ ಕಳುಹಿಸುವುದು.

**ಮಂಡಲಿಯ ವತಿಯಿಂದ ಪ್ರಾಂಶುಪಾಲರಿಗೆ ನೀಡಲಾಗಿರುವ Username ಗೆ ಸಂಬಂಧಿಸಿದ Password ನ್ನು ಗೌಪ್ಯವಾಗಿಟ್ಟುಕೊಳ್ಳುವುದು.**

ನಿರ್ದೇಶಕರು (ಪಿ.ಯು. ಪರೀಕ್ಷೆ)
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ.

**ಅಗತ್ಯ ಕ್ರಮಕ್ಕಾಗಿ:-**

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇವರಿಗೆ.
2) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ.

**ಪ್ರತಿಗಳನ್ನು ಗೌರವಪೂರ್ವಕವಾಗಿ ಸಲ್ಲಿಸಿದೆ:-**

1) ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು.
2) ಮಾನ್ಯ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12

Scanned with AnyScanner